305 ಶ್ರೀ ಕುಲಕುರ್ಣಿ ಶ್ರೀಕಾಂತ್ ಸುಬ್ಬರಾವ್ : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷ್ಣಾ ನದಿಯಿಂದ ಏತ ನೀರಾವರಿ ಮಾಡಲು ಸಣ್ಣ ನೀರಾವರಿ ಇಲಾಖೆ ಮಾಡಿದ ಅಂದಾಜು ಪಟ್ಟಿಗೆ ತಾಂತ್ರಿಕ ಒಪ್ಪಿಗೆ ಪಡೆದಿದೆಯೇ;

ಆ) ಪಡೆದಿದ್ದಲ್ಲಿ, ಎಷ್ಟು ಎಕರೆ ಜಮೀನು ನೀರಾವರಿ ಸೌಲಭ್ಯ ಪಡೆಯುತ್ತಿದೆ;

ಇ) ದೊಡ್ಡ ನೀರಾವರಿ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ಏತ ನೀರಾವರಿಗೆ ಮಂಜೂರಾತಿ ನೀಡಿ, ಕಾರ್ಯಾರಂಭವಾಗುವುದೇ?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) ಸಣ್ಣ ನೀರಾವರಿ ಇಲಾಖೆಯ ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿಯು ಈ ಯೋಜನೆಯ ಅಂದಾಜು ಪಟ್ಟಿಗೆ ತೀರುವಳಿ ನೀಡಿದೆ. ಆದರೆ ಅನುದಾನದ ಕೊರತೆಯಿಂದಾಗಿ ಸದರಿ ಕಾಮಗಾರಿಯ ಅಂದಾಜು ಪಟ್ಟಿಗೆ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಸಣ್ಣ ನೀರಾವರಿ ಇಲಾಖೆಯು ಯೋಜನೆಯ ಅಂದಾಜನ್ನು 31.00 ಕೋಟಿ ರೂ.ಗಳಿಗೆ ತಯಾರಿಸಿದೆ. ಅನುದಾನದ ಕೊರತೆಯಿಂದಾಗಿ ಈ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಳ್ಳುತ್ತಿಲ್ಲ. ಮುಂದಿನ ಆರ್ಥಿಕ ವರ್ಷದಲ್ಲಿ ಅನುದಾನ ಲಭ್ಯವಾದಲ್ಲಿ ಕಾಮಗಾರಿಯನ್ನು ಸಣ್ಣ ನೀರಾವರಿ ಇಲಾಖೆಯಿಂದ ಕೈಗೆತ್ತಿಕೊಂಡು ನಿರ್ವಹಿಸಲಾಗುವುದು.

585 ಶ್ರೀ ಬಿ.ಸಿ.ಪಾಟೀಲ್ : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿರೇಕೆರೂರು ತಾಲ್ಲೂಕಿನ ಮಾವಿನತೋಪು ಕೆರೆಯು 240 ಎಕರೆ ವಿಸ್ತೀರ್ಣವಿದ್ದು, ಹಲವು ವರ್ಷಗಳ ಹಿಂದೆಯೆ ಈ ಕೆರೆಯ ಅಚ್ಚುಕಟ್ಟು ಒಡೆದಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈವರೆಗೂ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ?